145 ನೇ ... 
ನಿ-72
ಶ್ರೀ-06.

# ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಪುಟ್ಟಣ್ಣ ಇವರು ನಿಯಮ 72 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ

**ಪ್ರಸ್ತಾಪಿಸಿರುವ ವಿಷಯ:**

"ರಾಜ್ಯದಲ್ಲಿ ಏಪ್ರಿಲ್ 2006ರಿಂದ ಜಾರಿಗೆ ಬರುವಂತೆ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗಿದೆ. ಸದರಿ ಯೋಜನೆಯನ್ನು ರಾಜ್ಯ ಸರ್ಕಾರವು ಸರ್ಕಾರಿ ನೌಕರರಿಗೆ ಮಾತ್ರ ಅನುಕೂಲವಾಗುವಂತೆ ಜಾರಿಗೆ ತಂದಿದೆ. ಆದರೆ ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಅನುದಾನಿತ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ 2006 ರಿಂದ ಈಚೆಗೆ ನೇಮಕಾತಿಯಾಗಿರುವ ನೌಕರರಿಗೆ ಇದುವರೆವಿಗೆ ಜಾರಿಗೆ ತಂದಿರುವುದಿಲ್ಲ. ಇದರಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಾವಿರಾರು ನೌಕರರು ಯಾವುದೇ ಪಿಂಚಣಿಯು ಇಲ್ಲದೆ ನಿವೃತ್ತರಾಗುತ್ತಿದ್ದು ತುಂಬಾ ತೊಂದರೆಯಾಗುತ್ತಿದೆ. ಆದ್ದರಿಂದ 2006ರಿಂದೀಚೆಗೆ ನೇಮಕವಾಗಿರುವ ಎಲ್ಲಾ ಸರ್ಕಾರಿ ನೌಕರರು ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಬೇಕೆಂಬ ವಿಷಯವನ್ನು ನಿಯಮ 72ರಲ್ಲಿ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯಲಾಗಿದೆ."

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ-ಮಂಡಳಿಗಳು, ಸಂಘಗಳು, ವಿಶ್ವವಿದ್ಯಾನಿಲಯಗಳು, ರಾಜ್ಯದ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೂ ಸಹ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ತನ್ನ ಸ್ವಂತ ಮೂಲಗಳಿಂದ ಭರಿಸುವ ಷರತ್ತಿಗೊಳಪಟ್ಟು ದಿನಾಂಕ: 01.04.2006ರಿಂದ ಜಾರಿಗೆ ಬರುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರಲ್ಲಿ ವಿಸ್ತರಿಸಲಾಗಿದೆ.

**ಸಂಖ್ಯೆ: ಆಇ 246 ಪಿಇಎನ್ 2021**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ